



ಅರುಣ ಪಿ. ಭಟ್ಟ

## ವಾರಭವಿಷ್ಯ 8.7.2021ರಿಂದ 14.07.2021ರವರೆಗೆ




ಈ ವಾರದ ಆರಂಭದಲ್ಲೇ ಸಂಬಂಧಿಕರ ಭೇಟಿಗೆ ನಿಶ್ಚಯ ಮಾಡುವ ಸಾಧ್ಯತೆ ಇದೆ. ಸೋದರ ಸಂಬಂಧಿಗಳನ್ನು ಭೇಟಿ ಆಗಲಿದ್ದೀರಿ. ಇನ್ನು ಉದ್ಯೋಗಸ್ಥರಿಗೆ ತಾತ್ಕಾಲಿಕ ವರ್ಗಾವಣೆ ಸಾಧ್ಯತೆ ಇದೆ. ವಾರದ ಮಧ್ಯ ಭಾಗದಲ್ಲಿ ಕೌಟುಂಬಿಕ ಜೀವನ ಸಂತೋಷವಾಗಿರುತ್ತದೆ. ಸಂಗಾತಿ ಮಕ್ಕಳ ಜತೆಗಿನ ಬಾಂಧವ್ಯ ಉತ್ತಮವಾಗಿರುತ್ತದೆ. ಶುಭದಿನ 10. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಈ ವಾರದ ಶುರುವಿನಲ್ಲೇ ಆದಾಯ ಹೆಚ್ಚಿಸಿಕೊಳ್ಳುವಲ್ಲಿ ಯಶಸ್ವಿಯಾ ಗುತ್ತೀರಿ. ಜತೆಗೆ ಖರ್ಚನ್ನು ಕೂಡ ಕಡಿಮೆ ಮಾಡಿಕೊಳ್ಳುವಲ್ಲಿ ಯಶಸ್ವಿ ಆಗುತ್ತೀರಿ. ಉದ್ಯಮಿಗಳು, ಉದ್ಯೋಗಸ್ಥರು ಹಿಂದೆಂದಿಗಿಂತ ಹೆಚ್ಚು ಚಟುವಟಿಕೆಯಿಂದ ಕೆಲಸ ಮಾಡುತ್ತೀರಿ. ವೈಯಕ್ತಿಕ ಜೀವನದಲ್ಲಿ ಸಣ್ಣ ಪುಟ್ಟ ವಿಷಯಗಳಿಗು ಭಿನ್ನಾಭಿಪ್ರಾಯ ತಲೆದೋರಲಿದೆ. ಶುಭದಿನ 8. ಹನುಮಾನ್ ಚಾಲಿಸ್ ಪಠಿಸಿರಿ.




ವ್ಯಾಪಾರಸ್ಥರಿಗೆ ಅತ್ಯುತ್ತಮವಾದ ಸಮಯ ಇದು. ಆರೋಗ್ಯ ಕೂಡ ಈ ಅವಧಿಯಲ್ಲಿ ಉತ್ತಮವಾಗಿರುತ್ತದೆ. ಇದರಿಂದ ನಿಮಗೆ ಸಮಾಧಾನ ಸಂತೋಷ ಉಂಟಾಗುತ್ತದೆ. ನೀವು ಅಂದುಕೊಂಡ ಹಲವು ಕೆಲಸಗಳು ಪೂರ್ಣಗೊಳ್ಳುತ್ತವೆ. ಉದ್ಯೋಗಸ್ಥರಿಗೆ ಮಾಡುವ ಕೆಲಸದಲ್ಲಿ ಗುಣಮಟ್ಟದ ವೇಗ ಕಂಡುಕೊಳ್ಳಲು ಸಹಕಾರಿ. ಶುಭದಿನ 9. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಶೈಕ್ಷಣಿಕ ವಲಯದಲ್ಲಿ ಇರುವವರಿಗೆ ಸಾಧನೆಗೆ ಅತ್ಯುತ್ತಮವಾದ ಅವಧಿ ಇದು. ತಂತ್ರಜ್ಞಾನ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಹಲವು ಅವಕಾಶಗಳು ಒಟ್ಟೊಟ್ಟಿಗೆ ಬರಲಿವೆ. ಜತೆಗೆ ಬಡ್ತಿ ಸಿಗುವ ಸಾಧ್ಯತೆಯೂ ಇದೆ. ಆರೋಗ್ಯ ಬಗ್ಗೆ ನಿರ್ಲಕ್ಷ್ಯ ಮಾಡದೇ ಕಡ್ಡಾಯವಾಗಿ ವೈದ್ಯರಿಂದ ಚಿಕಿತ್ಸೆ ಪಡೆದುಕೊಳ್ಳಿ. ಸ್ವಯಂ ವೈದ್ಯ ಯಾವ ಕಾರಣಕ್ಕೂ ಬೇಡ. ಶುಭದಿನ 12. ಶಿವಕವಚ ಪಠಣ ಮಾಡಿರಿ.




ವಾರದ ಶುರುವಿನಿಂದಲೇ ಕೆಲಸಗಳನ್ನು ಪೂರೈಸಲು ಬಹಳ ಶ್ರಮ ಹಾಕುತ್ತೀರಿ. ಹಣ ಹೂಡಿಕೆ ವ್ಯವಹಾರದಲ್ಲಿ ನಿಮ್ಮ ಸ್ಥಾನಮಾನಕ್ಕೆ ಧಕ್ಕೆ ಆಗುವ ಸಾಧ್ಯತೆ ಇದೆ. ಯಾರನ್ನೂ ಸುಮ್ಮನೆ ನಂಬುವುದು ಒಳ್ಳೆಯದಲ್ಲ. ವಂಚಕರ ಬಗ್ಗೆ ಎಚ್ಚರಿಕೆಯಿಂದ ಇರಬೇಕು. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಕೈಕೊಡುವ ಸಾಧ್ಯತೆ ಇದೆ. ಶುಭದಿನ 14. ಲಿಂಗಾಷ್ಟಕ ಪಠಿಸಿರಿ.




ವಾರದ ಆರಂಭದಿಂದಲೇ ವ್ಯವಹಾರದಲ್ಲಿ ನಿಮಗೆ ಇರುವ ಕನಸನ್ನು ಈಡೇರಿಸಿಕೊಳ್ಳಲು ಶ್ರಮ ಹಾಕುತ್ತೀರಿ. ಇದರಿಂದ ಮುಂಬರುವ ದಿನಗಳಲ್ಲಿ ನಿಮಗೇ ಅನುಕೂಲ ಆಗಲಿದೆ. ಭೂಮಿ ಖರೀದಿ ವ್ಯವಹಾರಕ್ಕೆ ಸಂಬಂಧಿಸಿದಂತೆ ಹಲವು ಅವಕಾಶಗಳು ನಿಮಗೆ ದೊರೆಯುತ್ತವೆ. ಧಾರ್ಮಿಕ ಕೆಲಸ ಕಾರ್ಯಗಳಲ್ಲಿ ಹಿನ್ನಡೆ ಅನುಭವಿಸಬೇಕಾಗುತ್ತದೆ. ಶುಭದಿನ 12. ಚಂಡಿ ಪಾರಾಯಣ ಮಾಡಿರಿ.




ಕೌಟುಂಬಿಕ ವಿಚಾರದಲ್ಲಿ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಹಣಕಾಸಿಗೆ ಏನೂ ಕೊರತೆ ಇರುವುದಿಲ್ಲ. ಆಲಸ್ಯ ನಿಮ್ಮನ್ನು ಕಾಡಬಹುದು. ನಿಮ್ಮ ದೈನಂದಿನ ವ್ಯವಹಾರಗಳಲ್ಲಿ ಏರಿಳಿತಗಳಾಗುತ್ತವೆ. ವಾರದ ಮಧ್ಯದಲ್ಲಿ ಮನೆಗೆ ಸಂಬಂಧಿಸಿದ ವಿಷಯಗಳು ಪ್ರಾಮುಖ್ಯ ಪಡೆಯುತ್ತವೆ. ಮನೆಗೆ ದುಬಾರಿ ಪೀಠೋಪಕರಣ ಖರೀದಿ ಮಾಡುವ ಸಂಭವವಿದೆ. ಶುಭದಿನ 12. ಸೌಂದರ್ಯ ಲಹರಿ ಪಠಿಸಿರಿ.




ಶೈಕ್ಷಣಿಕ ರಂಗದಲ್ಲಿ ಕಾರ್ಯ ನಿರ್ವಹಿಸುವವರಿಗೆ ವಾರದ ಆರಂಭದಲ್ಲಿ ಅದ್ಭುತವಾದ ಯಶಸ್ಸು ದೊರೆಯುವ ಅವಕಾಶಗಳಿವೆ. ಸಂಗೀತ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಗೌರವಯುತವಾದ ಸ್ಥಾನಮಾನ ದೊರೆಯಲಿದೆ. ಹಲವು ಘಟನೆಗಳು ನೀವು ಅಂದುಕೊಂಡ ದಿಕ್ಕಿನ ಕಡೆಗೆ ಸಾಗುವುದರಿಂದ ಬಹಳ ಸಂತೋಷಗೊಳ್ಳುವಿರಿ. ಶುಭದಿನ 14. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಕೌಟುಂಬಿಕ ಜೀವನದಲ್ಲಿ ನಿಮ್ಮ ಜವಾಬ್ದಾರಿಗಳು ಹೆಚ್ಚಾಗಲಿವೆ. ಸಂತಾನ ನಿರೀಕ್ಷೆಯಲ್ಲಿ ಇರುವ ದಂಪತಿಗೆ ಶುಭ ಸುದ್ದಿ ಕೇಳುವ ಯೋಗ ಇದೆ. ಪೋಷಕರ ಅಗತ್ಯಗಳನ್ನು ಅರಿತು ಅವುಗಳನ್ನು ಪೂರೈಸಲು ಹೆಚ್ಚು ಪ್ರಯತ್ನ ಪಡುತ್ತೀರಿ. ವಾರದ ಮಧ್ಯ ಭಾಗದಲ್ಲಿ ನಿಮಗೆ ಅನುಕೂಲಕರವಾದ ಕೆಲ ಬೆಳವಣಿಗೆಗಳು ಆಗಲಿವೆ. ಶುಭದಿನ 11. ಕಾಲಭೈರವನ ಸೇವೆ ಮಾಡಿರಿ.




ನಿಮ್ಮ ಶ್ರಮಕ್ಕೆ ಉತ್ತಮ ಪ್ರತಿಫಲ ದೊರೆಯುತ್ತದೆ. ಮನೆ ಹಾಗೂ ಕುಟುಂಬದಲ್ಲಿ ಸಕಾರಾತ್ಮಕವಾದ ವಾತಾವರಣ ಸೃಷ್ಟಿಸುವಲ್ಲಿ ಯಶಸ್ವಿಯಾಗುತ್ತೀರಿ. ಶ್ರಮದಿಂದ ಆದಾಯ ಹೆಚ್ಚಳಕ್ಕೆ ಅವಕಾಶ ದೊರೆಯುತ್ತದೆ. ಉದ್ಯೋಗಸ್ಥರಿಗೆ ವಾರದ ಮಧ್ಯ ಭಾಗದಲ್ಲಿ ಬಡ್ತಿ ದೊರೆಯುವ ಅವಕಾಶಗಳಿವೆ. ರಾಜಕೀಯವಾಗಿ ವರ್ಚಸ್ಸು ಉಳಿಸಿಕೊಳ್ಳುತ್ತೀರಿ. ಶುಭದಿನ 11. ವಿಷ್ಣು ಸಹಸ್ರನಾಮ ಮಾಡಿ.




ವಾರದ ಶುರುವಿನಲ್ಲಿ ಕೌಟುಂಬಿಕ ವಿಚಾರಗಳಿಗಾಗಿ ದೂರ ಪ್ರಯಾಣ ಮಾಡಬೇಕಾಗುತ್ತದೆ. ಕೆಲಸ ಮಾಡುವ ನಿಮ್ಮ ಸಾಮರ್ಥ್ಯ ನಿರಂತರವಾಗಿ ಹೆಚ್ಚಾಗುತ್ತಾ ಸಾಗುತ್ತದೆ. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಅಷ್ಟೇನೂ ಉತ್ತಮವಾಗಿ ಇರುವುದಿಲ್ಲ. ಇದು ನಿಮ್ಮ ಚಿಂತೆಗೆ ಕಾರಣವಾಗಲಿದೆ. ವಾರದ ಅಂತ್ಯದಲ್ಲಿ ನಿಮ್ಮ ಆರೋಗ್ಯ ಸಮಸ್ಯೆ ನಿವಾರಣೆ ಆಗುತ್ತದೆ. ಶುಭದಿನ 14. ಗಣೇಶಪಂಚರತ್ನ ಸ್ತೋತ್ರ ಪಠಿಸಿರಿ.




ವಾರದ ಆರಂಭದಲ್ಲಿ ವ್ಯವಹಾರ ಉದ್ಯಮದ ವಿಸ್ತರಣೆ ಬಗ್ಗೆ ಆಲೋಚನೆ ಮಾಡುತ್ತೀರಿ. ನೀವು ಕಾರ್ಯ ನಿರ್ವಹಿಸುವ ಸಂಸ್ಥೆಯ ದೀರ್ಘಾವಧಿ ಜವಾಬ್ದಾರಿಯೊಂದನ್ನು ನೀವೇ ಪೂರ್ಣಗೊಳಿಸಲು ಒಪ್ಪಿಕೊಳ್ಳುತ್ತೀರಿ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ವಾರದ ಮಧ್ಯ ಭಾಗದಲ್ಲಿ ಕೌಟುಂಬಿಕ ವಿಚಾರವಾಗಿಯೇ ಪ್ರಯಾಣ ಮಾಡಬೇಕಾಗುತ್ತದೆ. ಶುಭದಿನ 13. ಲಕ್ಷ್ಮೀ ನರಸಿಂಹ ಸ್ತೋತ್ರ ಪಠಿಸಿರಿ.